ಶ್ರೀ ಡಿ.ವಿ.ಸದಾನಂದ ಗೌಡ (ಪುತ್ತೂರು) :- ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ದಕ್ಷಿಣ ಕನ್ನಡ ಜಿಲ್ಲಾ ಪುತ್ತೂರು ತಾಲ್ಲೂಕಿನ ಪುತ್ತೂರು, ಉಪ್ಪಿನಂಗಡಿ ಹಾಗೂ ಪ್ರಾರ್ಥಮಿಕ ಆರೋಗ್ಯ ಕೇಂದ್ರದ ವೈದ್ಯಾಧಿಕಾರಿಯವರ ನೇಮಕ ಆಗದೆ ಇರುವುದು ಸರ್ಕಾರದವರ ಗಮನಕ್ಕೆ ಬಂದಿದೆಯೇ;

ಆ) ಹಾಗಿದ್ದಲ್ಲಿ ಇವುಗಳನ್ನು ತುಂಬಲು ಸರ್ಕಾರದವರು ಕೈಗೊಂಡಿರುವ ಕ್ರಮಗಳೇನು?

ಡಾ: ಹೆಚ್.ಸಿ.ಮಹದೇವಪ್ಪ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು):- ಬಂದಿದೆ. ಉಪ್ಪಿನಂಗಡಿ ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ವೈದ್ಯರು ಕಾರ್ಯ ನಿರ್ವಹಿಸುತ್ತಿದ್ದಾರೆ. ಪ್ರಾರ್ಥಮಿಕ ಆರೋಗ್ಯ ಕೇಂದ್ರದಲ್ಲಿ ಎರಡು ವೈದ್ಯರ ಹುದ್ದೆಗಳು ಖಾಲಿ ಇದ್ದು ಅದರಲ್ಲಿ 1 ಹುದ್ದೆಗೆ ದಿನಾಂಕ: 10-2- 1995ರಂದು ಗುತ್ತಿಗೆ ಆಧಾರದ ವೈದ್ಯರನ್ನು ನೇಮಕಾತಿ ಮಾಡಲಾಗಿದೆ. ಮತ್ತೊಂದು ಖಾಲಿ ಹುದ್ದೆಯನ್ನು ಆದಷ್ಟು ಜಾಗ್ರತೆ ತುಂಬಲು ಕ್ರಮ ಕೈಗೊಳ್ಳಲಾಗುವುದು. ಪುತ್ತೂರು ಸಾರ್ವಜನಿಕ ಆಸ್ಪತ್ರೆಯಲ್ಲಿ ಒಂದು ಉಪ ಶಸ್ತ್ರ ಚಿಕಿತ್ಸಕರ ಹುದ್ದೆ ಖಾಲಿ ಇದ್ದು ಈ ಹುದ್ದೆಯನ್ನು ತುಂಬಲು ಸಾರ್ವಜನಿಕ ವರ್ಗಾವಣೆ ಸಮಯದಲ್ಲಿ ಕ್ರಮ ಕೈಗೊಳ್ಳಲಾಗುವುದು.

ವಿಷಯ:- ಕೆ.ಹೆಚ್.ಪಾಟೀಲ್ ಕ್ರೀಡಾಂಗಣ ಕೇಂದ್ರ.

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 279(436)

ಶ್ರೀ ಡಿ.ಆರ್.ಪಾಟೀಲ್ (ಗದಗ್):- ಮಾನ್ಯ ಯುವಜನ ಸೇವಾ ಮತ್ತು ಕ್ರೀಡಾ

ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ.

ಅ) ಗದಗ್ ಬೆಟಗೇರಿಯಲ್ಲಿ ನಿರ್ಮಾಣಗೊಳ್ಳುತ್ತಿರುವ ಕೆ.ಹೆಚ್.ಪಾಟೀಲ್ ಕ್ರೀಡಾಂಗಣವನ್ನು ಕೇಂದ್ರ ಸರ್ಕಾರವು ಮಂಜೂರು ಮಾಡಿದ್ದು, ಯಾವಾಗ ಹಾಗೂ ಎಷ್ಟು ಹಣವು ಮಂಜೂರು ಮಾಡಲಾಗಿದೆ?

ಆ) ಈ ಹಣವನ್ನು ಯಾವಾಗ ಬಿಡುಗಡೆ ಮಾಡಲಾಗುವುದು?

ಶ್ರೀ ಅಜಯಕುಮಾರ್ ಸರ್‌ನಾಯಕ್ (ಯುವಜನ ಸೇವಾ ಹಾಗೂ ಕ್ರೀಡಾ ಸಚಿವರು):-

ಅ) 16.12.1993ರಲ್ಲಿ ರೂ. 12.00ಲಕ್ಷ ಬಿಡುಗಡೆ ಮಾಡಲು ತಾತ್ವಿಕವಾಗಿ ಒಪ್ಪಲಾಗಿದೆ.

ಆ) ಸದರಿ ಕ್ರೀಡಾಂಗಣ ಸಮಿತಿಯು 38.00 ಲಕ್ಷ ರೂ.ಗಳನ್ನು ಖರ್ಚು ಮಾಡಿ, ಕೇಂದ್ರ ಸರ್ಕಾರಕ್ಕೆ ಪ್ರಗತಿ ವರದಿಯನ್ನು ಸಲ್ಲಿಸಿದ ನಂತರ.

ವಿಷಯ:- ಮಂಡಲ ಪಂಚಾಯಿತಿಗಳಲ್ಲಿರುವ ಗ್ರಂಥಾಲಯಗಳ ಮೇಲ್ವಿಚಾರಕರಿಗೆ ಗೌರವಧನ.

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 280(58)

ಶ್ರೀ ಆರ್.ಕೃಷ್ಣಪ್ಪ (ಜಯಮಹಲ್):- ಮಾನ್ಯ ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ.

ಅ) 1988-89 ರಲ್ಲಿ ರಾಜ್ಯದಲ್ಲಿ 100 ಮಂಡಲ ಪಂಚಾಯಿತಿಗಳಲ್ಲಿ ಗ್ರಂಥಾಲಯಗಳನ್ನು ಸ್ಥಾಪಿಸಿದ್ದು, ಸರ್ಕಾರದವರ ಗಮನಕ್ಕೆ ಬಂದಿದೆಯೇ?